**Akashvani : Bangalore**
**National Bulletin In Kannada**
**16.09.2024 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

**೧. ಭಾರತವನ್ನು ವಿಶ್ವದ ಅಗ್ರ ಆರ್ಥಿಕತೆಯನ್ನಾಗಿಸಲು ದೇಶದ ಜನರ ದೃಢ ಸಂಕಲ್ಪ - ಪ್ರಧಾನಿ ಮೋದಿ**

**೨. ದೇಶಾದ್ಯಂತ ಶ್ರದ್ಧಾಭಕ್ತಿಯಿಂದ ಮಿಲಾದ್-ಉನ್-ನಬಿ ಆಚರಣೆ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಶುಭಾಶಯ**

**೩. ಜಮ್ಮು-ಕಾಶ್ಮೀರದ ದೋಡಾದಲ್ಲಿಂದು ಅಮಿತ್ ಶಾ ಚುನಾವಣಾ ರ‍್ಯಾಲಿ**

**೪. ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ ; ಭಾರತ-ದಕ್ಷಿಣ ಕೊರಿಯಾ ತಂಡ ಹಣಾಹಣಿ**

**<><*<><>*><>**

ಭಾರತವನ್ನು ವಿಶ್ವದ ಮೂರು ಅಗ್ರ ಆರ್ಥಿಕತೆಗಳಲ್ಲಿ ಒಂದನ್ನಾಗಿಸುವ ದೃಢ ಸಂಕಲ್ಪದೊಂದಿಗೆ ೧೪೦ ಕೋಟಿ ಭಾರತೀಯರು ಕಾರ್ಯ ಪ್ರವೃತ್ತರಾಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಗುಜರಾತ್‌ನ ಗಾಂಧೀನಗರದ ಮಹಾತ್ಮಾಮಂದಿರದಲ್ಲಿ ಇಂದು ೪ನೇ ಜಾಗತಿಕ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಸಭೆ ಹಾಗೂ ಎಕ್ಸ್‌ಪೊ ಉದ್ಘಾಟಿಸಿ ಭಾಷಣ ಮಾಡುತ್ತಿದ್ದ ಅವರು, ೨೦೪೭ರ ವೇಳೆಗೆ ಭಾರತವನ್ನು ಅಭಿವೃದ್ಧಿಪಡಿಸುವುದು ನಮ್ಮ ಪ್ರಸಕ್ತ ಕ್ರಿಯಾಯೋಜನೆಯಾಗಿದೆ ಎಂದು ಘೋಷಿಸಿದರು. ನಮ್ಮ ಮೂರನೇ ಅಧಿಕಾರಾವಧಿಯ ಮೊದಲ ೧೦೦ ದಿನಗಳಲ್ಲಿ ಕೈಗೊಂಡ ನಿರ್ಧಾರಗಳು ನಮ್ಮ ಯೋಜನೆಗಳ ಆರಂಭದ ಹಂತ ಮಾತ್ರ ಎಂದು ಹೇಳಿದರು. ನಂತರ ಪ್ರಧಾನಿ ಅಹಮದಾಬಾದ್‌ನಿಂದ ಗಾಂಧೀನಗರ ಹಾಗೂ ಗಿಫ್ಟ್ ಸಿಟಿಗೆ ಸಂಪರ್ಕ ಕಲ್ಪಿಸುವ ಅಹಮದಾಬಾದ್ ಮೆಟ್ರೋ ೨ನೇ ಹಂತಕ್ಕೆ ಚಾಲನೆ ನೀಡಲಿದ್ದಾರೆ. ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ನಂತರ ಅವರು, ಅಹಮದಾಬಾದ್ ಮತ್ತು ಭುಜ್ ನಡುವೆ ದೇಶದ ಮೊದಲ ವಂದೇ ಭಾರತ್ ಮೆಟ್ರೋ ರೈಲು ಸೇರಿದಂತೆ ೮ ಸಾವಿರ ಕೋಟಿ ರೂಪಾಯಿಗಳ ವಿವಿಧ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ೪ನೇ ರಿ ಇನ್ವೆಸ್ಟ್ ಜಾಗತಿಕ ನವೀಕರಿಸಬಹುದಾದ ಇಂಧನ ಸಭೆ ಹಾಗೂ ವಸ್ತು ಪ್ರದರ್ಶನವನ್ನು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವಾಲಯ ಆಯೋಜಿಸಿದೆ. ಈ ಸಭೆಯು ನವೀಕರಿಸಬಹುದಾದ ಇಂಧನ ಮತ್ತು ನಿಯೋಜನೆಯಲ್ಲಿ ಭಾರತದ ಪ್ರಗತಿಯನ್ನು ಅನಾವರಣಗೊಳಿಸಲಿದೆ. ಕೇಂದ್ರದ ನವ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹಾಗೂ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಉದ್ಘಾಟನಾ ಸಮಾರಂಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ಮಿಲಾದ್ ಉನ್ ನಬಿ ಹಬ್ಬದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ದೇಶದ ಜನತೆಗೆ, ವಿಶೇಷವಾಗಿ ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ. ಪ್ರವಾದಿ ಮೊಹಮ್ಮದ್ ಅವರು, ಸಮಾಜದ ಪ್ರೀತಿ, ಭ್ರಾತೃತ್ವ, ಸಮಾನತೆ, ಸಾಮರಸ್ಯ ಬಲಪಡಿಸುವ ಸ್ಫೂರ್ತಿಯಾಗಿದ್ದಾರೆ. ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆಗೆ ಒತ್ತು ನೀಡಿದ್ದಾರೆ. ಇತರರ ಬಗ್ಗೆ ಸಹಾನುಭೂತಿ ಹೊಂದಲು ಹಾಗೂ ಮಾನವೀಯತೆಯ ಸೇವೆ ಮಾಡಲು ಪ್ರವಾದಿ ಜನರನ್ನು ಪ್ರೋತ್ಸಾಹಿಸಿದ್ದರು ಎಂದು ರಾಷ್ಟ್ರಪತಿಯವರು ಹೇಳಿದ್ದಾರೆ. ಪವಿತ್ರ ಕುರಾನ್‌ನ ಬೋಧನೆಗಳನ್ನು ಮೈಗೂಡಿಸಿಕೊಳ್ಳಲು ಹಾಗೂ ಶಾಂತಿಯುತ ಸಮಾಜವನ್ನು ನಿರ್ಮಿಸಲು ಸಂಕಲ್ಪ ತೊಡುವಂತೆ ರಾಷ್ಟ್ರಪತಿಯವರು ಜನರಿಗೆ ಮನವಿ ಮಾಡಿದ್ದಾರೆ. ಪ್ರವಾದಿ ಹಜರತ್ ಮೊಹಮ್ಮದ್ ಅವರ ಸಹಾನುಭೂತಿ ಹಾಗೂ ನಮ್ರತೆಯ ಆದರ್ಶಗಳನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸ್ಮರಿಸಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಪ್ರವಾದಿ ಮೊಹಮ್ಮದ್ ಅವರ ಕಾಲಾತೀತ ಬೋಧನೆಗಳು ಕರುಣೆ ಹಾಗೂ ಸಾರ್ವತ್ರಿಕ

ಭ್ರಾತೃತ್ವವನ್ನು ಎತ್ತಿಹಿಡಿಯಲು ಮಾನವೀಯತೆಗೆ ಮಾರ್ಗದರ್ಶನ ನೀಡುವುದನ್ನು ಮುಂದುವರಿಸಬೇಕು ಎಂದು ಜಗದೀಪ್ ಧನ್‌ಕರ್ ಕರೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮಿಲಾದ್-ಉನ್-ನಬಿ ಹಬ್ಬದ ಅಂಗವಾಗಿ ಜನತೆಗೆ ಶುಭಾಶಯ ಕೋರಿದ್ದಾರೆ. ಸಾಮರಸ್ಯ ಹಾಗೂ ಒಗ್ಗಟ್ಟು ಸದಾ ಮೇಲುಗೈ ಸಾಧಿಸಿದರೆ ಸಂತೋಷ ಸಮೃದ್ಧಿಗೆ ಕಾರಣವಾಗುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಆಶಯ ವ್ಯಕ್ತಪಡಿಸಿದ್ದಾರೆ. ಪ್ರವಾದಿ ಮುಹಮ್ಮದ್ ಅವರ ಜನ್ಮದಿನವಾದ ಈದ್ ಮಿಲಾದ್-ಉನ್-ನಬಿಯನ್ನು ಇಂದು ದೇಶದ ವಿವಿಧ ಪ್ರದೇಶಗಳಲ್ಲಿ ಧಾರ್ಮಿಕ ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತದೆ. ಪ್ರವಾದಿ ಮುಹಮ್ಮದ್ ಅವರ ಜೀವನ ಹಾಗೂ ಬೋಧನೆಗಳನ್ನು ಎತ್ತಿ ತೋರಿಸುವ "ಮಿಲಾದ್ ಮೆಹ್ಫಿಲ್ಸ್" ಮತ್ತು "ಸೀರತ್ ಸಮ್ಮೇಳನಗಳು" ನಡೆಯಲಿವೆ. ಈ ಸಂದರ್ಭದಲ್ಲಿ ಮೀಲಾದ್ ಮೆರವಣಿಗೆಯನ್ನು ಸಹ ಆಯೋಜಿಸಲಾಗಿದೆ.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಯ ಪ್ರಚಾರ ಇಂದು ಅಂತ್ಯಗೊಳ್ಳಲಿದೆ. ೭ ಜಿಲ್ಲೆಗಳ ೨೪ ವಿಧಾನಸಭಾ ಕ್ಷೇತ್ರಗಳಿಗೆ ಇದೇ ತಿಂಗಳ ೧೮ ರಂದು ಮೊದಲ ಹಂತದಲ್ಲಿ ಮತದಾನ ನಡೆಯಲಿದೆ. ದೋಡಾ, ಕಿಶ್ತ್ವಾರ್, ರಾಂಬನ್, ಅನಂತನಾಗ್, ಪುಲ್ವಾಮಾ, ಕುಲ್ಗಾಮ್ ಹಾಗೂ ಶೋಪಿಯಾನ್ ಜಿಲ್ಲೆಗಳಲ್ಲಿ ಮತದಾನ ನಡೆಯಲಿದೆ. ಎರಡನೇ ಮತ್ತು ಮೂರನೇ ಹಂತದ ಮತದಾನ ಕ್ರಮವಾಗಿ ಸೆಪ್ಟೆಂಬರ್ ೨೫ ಮತ್ತು ಅಕ್ಟೋಬರ್ ೧ ರಂದು ನಡೆಯಲಿದೆ. ಮತಗಳ ಎಣಿಕೆ ಕಾರ್ಯ ಅಕ್ಟೋಬರ್ ೮ ರಂದು ನಡೆಯಲಿದೆ. ಜಮ್ಮು ಮತ್ತು ಕಾಶ್ಮೀರ ವಿಧಾನಸಭೆ ಒಟ್ಟು ೯೦ ಸ್ಥಾನಗಳನ್ನು ಹೊಂದಿದೆ, ಈ ಪೈಕಿ ೭೪ ಸಾಮಾನ್ಯ, ಏಳು ಪರಿಶಿಷ್ಟ ಜಾತಿ ಮತ್ತು ಒಂಬತ್ತು ಸ್ಥಾನಗಳು ಪರಿಶಿಷ್ಟ ಪಂಗಡಗಳಿಗೆ ಮೀಸಲಾಗಿವೆ.

<><*<><>*><>

ಜಮ್ಮು-ಕಾಶ್ಮೀರ ವಿಧಾನಸಭೆಯ ಮೂರನೇ ಹಂತದ ಚುನಾವಣೆಗೆ ನಾಮಪತ್ರ ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಶುಕ್ರವಾರ ನಡೆದ ನಾಮಪತ್ರಗಳ ಪರಿಶೀಲನೆಯಲ್ಲಿ ೪೦ ಕ್ಷೇತ್ರಗಳಲ್ಲಿ ೩೭ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಂಡಿದೆ. ಅಕ್ಟೋಬರ್ ೧ ರಂದು ೩ನೇ ಹಂತದ ಚುನಾವಣೆ ನಡೆಯಲಿದೆ. ಪರಿಶೀಲನೆಯಲ್ಲಿ ೪೪೯ ಅಭ್ಯರ್ಥಿಗಳ ನಾಮಪತ್ರಗಳು ಸಿಂಧುವಾಗಿವೆ. ೯೦ ಸದಸ್ಯ ಬಲದ ಜಮ್ಮು-ಕಾಶ್ಮೀರ ವಿಧಾನಸಭೆಗೆ ಮೂರು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ಇದೇ ೧೮, ೨೫ ಹಾಗೂ ಅಕ್ಟೋಬರ್ ೧ ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ ೮ ರಂದು ಮತಗಳ ಎಣಿಕೆ ಕಾರ್ಯ ನಡೆಯಲಿದೆ.

<><*<><>*><>

ಜಮ್ಮು-ಕಾಶ್ಮೀರದ ದೋಡಾ ಜಿಲ್ಲೆಯಲ್ಲಿಂದು ಬಿಜೆಪಿ ಹಿರಿಯ ನಾಯಕ ಕೇಂದ್ರ ಗೃಹ ಸಚಿವ ಅಮಿತ್ ಶಾ ಮೂರು ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ. ರಾಮ್‌ಬನ್, ಕಿಸ್ತ್‌ವಾರ್ ಹಾಗೂ ಪಡ್ಡಾರ್‌ನಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಬೆಂಬಲಿಸಿ ಮೂರು ಚುನಾವಣಾ ರ್‍ಯಾಲಿಗಳಲ್ಲಿ ಅಮಿತ್ ಶಾ ಪಾಲ್ಗೊಳ್ಳಲಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಬಿಜೆಪಿ ರಾಷ್ಟ್ರೀಯಧ್ಯಕ್ಷ ಜೆ.ಪಿ. ನಡ್ಡಾ ಅವರು, ಇದೇ ೨೦ ರಂದು ಜಮ್ಮುವಿಗೆ ಭೇಟಿ ನೀಡಲಿದ್ದು, ದೇಗುಲ ನಗರದಲ್ಲಿ ಆಯೋಜಿಸಲಾಗಿರುವ ಮೆಗಾ ರೋಡ್ ಶೋನಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ, ನಿನ್ನೆ ಗಾಂಧೀನಗರದಲ್ಲಿ ಶ್ರೀ ಸೋಮನಾಥ್ ಟ್ರಸ್ಟ್‌ನ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸೋಮನಾಥ ದೇಗುಲದಲ್ಲಿ ಭಕ್ತಾದಿಗಳ ಉತ್ತಮ ಅನುಭವಕ್ಕೆ ಮತ್ತಷ್ಟು ಹೆಚ್ಚಿಸಲು ಹಾಗೂ ವಿವಿಧ ಸೌಲಭ್ಯಗಳನ್ನು ಇನ್ನಷ್ಟು ಸುಧಾರಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಭೆಯಲ್ಲಿ ಪರಾಮರ್ಶೆ ನಡೆಸಿದ್ದಾಗಿ ಪ್ರಧಾನಿ ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಎರಡು ದಿನಗಳ ಗುಜರಾತ್ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ, ನಿನ್ನೆ ತವರು ರಾಜ್ಯಕ್ಕೆ ಆಗಮಿಸಿದ್ದಾರೆ. ಅವರು ಇಂದು ಹಲವು ಉದ್ಘಾಟನೆಗಳು ಸೇರಿದಂತೆ ಸರಣಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ರಾಜಸ್ಥಾನದ ಸಿರೋಹಿ ಜಿಲ್ಲೆಯಲ್ಲಿ ಕಳೆದ ರಾತ್ರಿ ಭಾರಿ ರಸ್ತೆ ಅಪಘಾತ ಸಂಭವಿಸಿದೆ. ಪಿಂಡ್ವಾರಾ ಪೊಲೀಸ್ ಠಾಣೆ ವ್ಯಾಪ್ತಿಯ ಕಂಟಲ್ ಬಳಿ ಟ್ರಕ್ ಹಾಗೂ ಜೀಪ್ ನಡುವೆ ಡಿಕ್ಕಿ ಸಂಭವಿಸಿದ ಪರಿಣಾಮ, ೮ ಮಂದಿ ಸಾವನ್ನಪ್ಪಿ, ೧೮ ಮಂದಿ ಗಾಯಗೊಂಡಿದ್ದಾರೆ. ಹೆಚ್ಚಿನ ಸಂಖ್ಯೆಯ ಪ್ರಯಾಣಿಕರನ್ನು ತುಂಬಿಕೊಂಡು

ಚಲಿಸುತ್ತಿದ್ದ ಜೀಪ್, ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ. ಘಟನೆ ಸಂಬಂಧ ಸಿರೋಹಿ ಎಸ್ಪಿ ಅನಿಲ್ ಕುಮಾರ್ ಮಾತನಾಡಿ, ಪೊಲೀಸರು ಸ್ಥಳಕ್ಕೆ ಧಾವಿಸಿದ್ದು, ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗಳಿಗೆ ರವಾನಿಸಲಾಗಿದೆ ಎಂದಿದ್ದಾರೆ. ಜೀಪಿನಲ್ಲಿ ಸುಮಾರು ೨೭ ಮಂದಿ ಪ್ರಯಾಣಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಎಲ್ಲರೂ ಉದಯಪುರ ಜಿಲ್ಲೆಯ ಉಗ್ನಸಾಗರದವರಾಗಿದ್ದು, ಪಾಲಿಯಲ್ಲಿರುವ ದೇವಸ್ಥಾನಕ್ಕೆ ತೆರಳುತ್ತಿದ್ದರು. ಘಟನೆಯ ಬಗ್ಗೆ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಸಂತಾಪ ವ್ಯಕ್ತಪಡಿಸಿದ್ದಾರೆ.

**<><*<><>*><>**

ಅಮೆರಿಕದ ಫ್ಲೋರಿಡಾದ ಪಶ್ಚಿಮ ಪಾಮ್ ಕಡಲ ದಂಡೆಯಲ್ಲಿರುವ ಟ್ರಂಪ್ ನ್ಯಾಷನಲ್ ಗಾಲ್ಫ್ ಕ್ಲಬ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳೆದ ರಾತ್ರಿ ಗುಂಡಿನ ದಾಳಿಗಳು ನಡೆದಿರುವ ಬಗ್ಗೆ ವರದಿಯಾದ ನಂತರ ತಾವು ಸುರಕ್ಷಿತವಾಗಿರುವುದಾಗಿ ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಗುಂಡಿನ ದಾಳಿಯ ಶಬ್ದಗಳು ಕೇಳಿ ಬಂದಾಗ ಟ್ರಂಪ್, ಗಾಲ್ಫ್ ಕೋರ್ಸ್‌ನಲ್ಲಿದ್ದರು ಎಂದು ಟ್ರಂಪ್ ಅವರ

**<><*<><>*><>**

ಇಂದು ಅಂತಾರಾಷ್ಟ್ರೀಯ ಓಝೋನ್ ಪದರ ಸಂರಕ್ಷಣಾ ದಿನ. ಪ್ರತಿ ವರ್ಷ ಸೆಪ್ಟೆಂಬರ್ ೧೬ರಂದು ಅಂತಾರಾಷ್ಟ್ರೀಯ ಓಝೋನ್ ಪದರ ಸಂರಕ್ಷಣಾ ದಿನವನ್ನಾಗಿ ವಿಶ್ವಸಂಸ್ಥೆ ಘೋಷಿಸಿದೆ. ಭೂಮಿಯನ್ನು ಸುತ್ತುವರಿದಿರುವ ಓಝೋನ್ ಪದರ ರಕ್ಷಣಾ ಕವಚದಂತೆ ಕಾರ್ಯನಿರ್ವಹಿಸುತ್ತದೆ. ಭೂಮಂಡಲದ ಜೀವಸಂಕುಲಕ್ಕೆ ಮಾರಕವಾಗಬಲ್ಲಸೂರ್ಯನ ನೇರಳಾತೀತ ಕಿರಣಗಳನ್ನು ಈ ಪದರ ತಡೆಯುತ್ತದೆ. ಮನುಷ್ಯ ನಿರ್ಮಿತ ರಾಸಾಯನಿಕಗಳಾದ ಕ್ಲೋರೋಫ್ಲೋರೋ ಕಾರ್ಬನ್, ಹ್ಯಾಲೋ ಕಾರ್ಬನ್ ರೆಫ್ರಿಜರೆಂಟ್‌ಗಳಿಂದ ಓಝೋನ್ ಪದರಕ್ಕೆ ಕುತ್ತು ಬಂದಿದೆ. ಈ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಓಝೋನ್ ಪದರದ ಸಂರಕ್ಷಣೆಗೆ ಬೆಂಬಲ ನೀಡುವುದು ಈ ದಿನಾಚರಣೆಯ ಉದ್ದೇಶವಾಗಿದೆ.

**<><*<><>*><>**

ಯಾಗಿ ಚಂಡಮಾರುತದಿಂದ ಬಾಧಿತಗೊಂಡಿರುವ ದೇಶಗಳಿಗೆ ಮಾನವೀಯ ನೆರವು ಕಲ್ಪಿಸಲು ಭಾರತ ಸದ್ಭಾವ ಹೆಸರಿನಲ್ಲಿ ಕಾರ್ಯಾಚರಣೆ ಆರಂಭಿಸಿದೆ. ಈ ಕಾರ್ಯಾಚರಣೆ ಅಡಿ ಭಾರತ ವಿಯೆಟ್ನಾಂಗೆ ಒಂದು ಮಿಲಿಯನ್ ಡಾಲರ್ ಮೌಲ್ಯದ ಪರಿಹಾರ ನೆರವನ್ನು ರವಾನಿಸಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನಿನ್ನೆ ವಿಶೇಷ ವಿಮಾನದ ಮೂಲಕ ೩೫ ಟನ್ ಪರಿಹಾರ ಸಾಮಗ್ರಿಗಳನ್ನು ವಿಯೆಟ್ನಾಂಗೆ ರವಾನಿಸಲಾಯಿತು. ಇದರಲ್ಲಿ ನೀರು ಶುದ್ಧೀಕರಣ ವಸ್ತುಗಳು, ನೀರಿನ ಪಾತ್ರೆಗಳು, ಹೊದಿಕೆಗಳು, ಅಡುಗೆ ಪಾತ್ರೆಗಳು ಹಾಗೂ ಸೋಲಾರ್ ಲ್ಯಾಟೀನ್‌ಗಳು ಒಳಗೊಂಡಿವೆ. ಲಾವೋಸ್‌ಗೆ ವಿಶೇಷ ವಿಮಾನದಲ್ಲಿ ೧೦ ಟನ್ ಮಾನವೀಯ ನೆರವನ್ನು ರವಾನಿಸಲಾಗಿದೆ. ನೈರ್ಮಲ್ಯದ ಕಿಟ್‌ಗಳು, ಹೊದಿಕೆಗಳು, ಸೊಳ್ಳೆ ಪರದೆ, ನೀರು ಶುದ್ಧೀಕರಣ ಮಾತ್ರೆಗಳು ಹಾಗೂ ಸೋಂಕು ನಿವಾರಕಗಳು ಸೇರಿದಂತೆ ಹಲವು ಪರಿಹಾರ ವಸ್ತುಗಳನ್ನು ರವಾನಿಸಲಾಗಿದೆ.

**<><*<><>*><>**

ಗುಜರಾತ್‌ನ ಗಾಂಧೀನಗರದಲ್ಲಿ ನಡೆಯುತ್ತಿರುವ ನವೀಕರಿಸಬಹುದಾದ ಇಂಧನ ಹೂಡಿಕೆದಾರರ ಜಾಗತಿಕ ಸಮ್ಮೇಳನದಲ್ಲಿ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಪಾಲ್ಗೊಂಡಿದ್ದಾರೆ. ಆಂಧ್ರಪ್ರದೇಶದಲ್ಲಿ ನವೀಕರಿಸಬಹುದಾದ ಇಂಧನ ವಲಯದಲ್ಲಿ ಹೂಡಿಕೆಗಳಿಗೆ ಇರುವ ಅವಕಾಶಗಳನ್ನು ಚಂದ್ರಬಾಬು ನಾಯ್ಡು ಅವರು ಸಮ್ಮೇಳನದಲ್ಲಿ ವಿವರಿಸಲಿದ್ದಾರೆ.

**<><*<><>*><>**

ಚೀನಾದ ಹುಲುನ್‌ಬುಯರ್‌ನಲ್ಲಿ ನಡೆಯುತ್ತಿರುವ ಹಾಕಿ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ೨೦೨೪ ರ ಸೆಮಿಫೈನಲ್‌ನಲ್ಲಿ ಇಂದು ಭಾರತ-ದಕ್ಷಿಣ ಕೋರಿಯಾವನ್ನು ಎದುರಿಸಲಿದೆ. ಪಂದ್ಯವು ಭಾರತೀಯ ಕಾಲಮಾನ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಪಂದ್ಯಾವಳಿಯಲ್ಲಿ ಭಾರತ ಮಾತ್ರ ಅಜೇಯ ತಂಡವಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>**